# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ದಾವಣಗೆರೆ ಜಿಲ್ಲೆ, ಹೊನ್ನಾಳಿ ತಾಲ್ಲೂಕಿನ ಪಲವನಹಳ್ಳಿ, ಹೊಸಕೊಪ್ಪ ಮತ್ತು ಇತರೆ 59 ಜನವಸತಿಗಳಿಗೆ DBOT ಆಧಾರದ ಮೇಲೆ ಬಹುಗ್ರಾಮ ಕುಡಿಯುವ ನೀರು ಯೋಜನೆಯನ್ನು ಜಲ ಜೀವನ್ ಮಿಷನ್ ಯೋಜನೆಯಡಿ ಸಂಯೋಜಿತಗೊಳಿಸಿದ NABARD-RIDF XXVI ರಡಿ ಅನುಷ್ಠಾನಗೊಳಿಸಲು ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:-**
1. ದಿನಾಂಕ:03.08.2020ರಂದು ನಡೆದ ರಾಜ್ಯ ಮಟ್ಟದ ಯೋಜನಾ ಮಂಜೂರಾತಿ ಸಮಿತಿ (SLSSC) ಸಭೆಯ ನಡವಳಿಗಳು.
2. ದಿನಾಂಕ:22.10.2020ರಂದು ನಡೆದ ರಾಜ್ಯ ಮಟ್ಟದ ತಾಂತ್ರಿಕ ಸಲಹಾ ಸಮಿತಿ(STA) ಸಭೆಯ ನಡವಳಿಗಳು.
3. ಮುಖ್ಯ ಅಭಿಯಂತರರು, ಗ್ರಾ.ಕು.ನೀ&ನೈ ಇಲಾಖೆರವರ ಇ-ಆಫೀಸ್ ಕಡತ ಸಂ:RDWSD-TECHOCN/11/2020.

---

**ಪೀಠಿಕೆ:**

ದಾವಣಗೆರೆ ಜಿಲ್ಲೆ, ಹೊನ್ನಾಳಿ ತಾಲ್ಲೂಕಿನ ಪಲವನಹಳ್ಳಿ ಹೊಸಕೊಪ್ಪ ಮತ್ತು ಇತರೆ 59 ಜನವಸತಿಗಳಿಗೆ ಶುದ್ಧ ಕುಡಿಯುವ ನೀರನ್ನು ಪೂರೈಕೆ ಮಾಡಲು DBOT ಆಧಾರದ ಮೇಲೆ ಬಹುಗ್ರಾಮ ಕುಡಿಯುವ ನೀರು ಯೋಜನೆಯನ್ನು ಜಲ ಜೀವನ್ ಮಿಷನ್ ಯೋಜನೆಯಡಿ ಸಂಯೋಜಿತಗೊಳಿಸಿದ NABARD-RIDF XXVIರಡಿ ಅನುಷ್ಠಾನಗೊಳಿಸಲು ದಿನಾಂಕ:03.08.2020ರಂದು ನಡೆದ ರಾಜ್ಯ ಮಟ್ಟದ ಯೋಜನಾ ಮಂಜೂರಾತಿ ಸಮಿತಿ (SLSSC) ಸಭೆಯಲ್ಲಿ ಪರಿಷ್ಕೃತ ಕ್ರಿಯಾ ಯೋಜನೆಗೆ ಅನುಮೋದನೆ ಪಡೆದಿದ್ದು, ದಿನಾಂಕ:22.10.2020ರಂದು ನಡೆದ ರಾಜ್ಯ ಮಟ್ಟದ ತಾಂತ್ರಿಕ ಸಲಹಾ ಸಮಿತಿ (STA) ಸಭೆಯಲ್ಲಿ ತಾತ್ವಿಕ ಅನುಮೋದನೆ ದೊರೆತಿರುತ್ತದೆ.

ಪ್ರಸ್ತಾಪಿತ ಯೋಜನೆಯನ್ನು ಭಾರತ ಸರ್ಕಾರದ ಜಲ ಜೀವನ್ ಮಿಷನ್ ಯೋಜನೆಯಡಿ ಕೈಗೆತ್ತಿಕೊಳ್ಳಲು ದಿನಾಂಕ:08.06.2020ರ 02020-21ನೇ ಕ್ರಿಯಾ ಯೋಜನೆಯಲ್ಲಿ ಸೇರಿಸಲ್ಪಟ್ಟಿರುತ್ತದೆ. ನಬಾರ್ಡ್ ಸಂಸ್ಥೆಯಿಂದ ಈ ಯೋಜನೆ ಸಂಬಂಧ ಆರ್ಥಿಕ ನೆರವನ್ನು ನೀಡಲು RIDFರಲ್ಲಿ ತಾತ್ವಿಕ ಅನುಮೋದನೆ ನೀಡಿ, ಅನುದಾನ ಬಿಡುಗಡೆಯಾದಲ್ಲಿ JJM ಕಾರ್ಯಕ್ರಮಕ್ಕೆ ಹೊಂದಾಣಿಕೆ ಮಾಡಬಹುದಾಗಿದೆ.

STA ಉಪ ಸಮಿತಿಯ ಸದಸ್ಯರ ಶಿಫಾರಸ್ಸಿನ ಅನ್ವಯ ತಾಂತ್ರಿಕವಾಗಿ ಈ ಯೋಜನಾ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ತುಂಗಭದ್ರಾ ಜಲಾಶಯವನ್ನು ಜಲಮೂಲವನ್ನಾಗಿ ಪರಿಗಣಿಸಲಾಗಿದ್ದು, ಚಿಲ್ಲೂರ್ ಗ್ರಾಮಕ್ಕೆ ಸಮೀಪದಲ್ಲಿರುವ ಹೊನ್ನಾಳಿ ತಾಲ್ಲೂಕಿನ ತುಂಗಭದ್ರಾ ನದಿಯಲ್ಲಿ Intake ನ್ನು ಅಳವಡಿಸಲು ವಿನ್ಯಾಸಿಸಲಾಗಿದೆ. ಸದರಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಾಗಿ ತುಂಗಭದ್ರಾ ನದಿಯಿಂದ 0.08 ಟಿ.ಎಂ.ಸಿ ನೀರನ್ನು ಹಂಚಿಕೆ ಮಾಡಲು ಒಟ್ಟಾರೆ ಕಚ್ಚಾ 6.26 MLD ನೀರನ್ನು ಪಡೆದುಕೊಳ್ಳಲು ಜಲ ಸಂಪನ್ಮೂಲ ಇಲಾಖೆ ಒಪ್ಪಿಗೆ ನೀಡಿರುತ್ತದೆ.

ಪ್ರಸ್ತುತ ಯೋಜನೆಯನ್ನು ಅನುಷ್ಠಾನಗೊಳಿಸಲು ನಬಾರ್ಡ್‌ನ RIDF ಅಡಿಯಲ್ಲಿ ರೂ.2259.00ಲಕ್ಷಗಳು, ಜಲ ಜೀವನ ಮಿಷನ್ ಯೋಜನೆಯನ್ನು ಸಂಯೋಜಿತಗೊಳಿಸಿ ಮತ್ತು ಭಾರತ ಸರ್ಕಾರದ ಅನುದಾನ ರೂ.2792.00ಲಕ್ಷಗಳು ಹಾಗೂ ರಾಜ್ಯ ಸರ್ಕಾರದ ರೂ.1875.00ಲಕ್ಷಗಳ ಅನುದಾನಗಳನ್ನು ಒಳಗೊಂಡಂತೆ ಸೇರಿ ಒಟ್ಟಾರೆ ಯೋಜನೆಯ ಅಂದಾಜು ಮೊತ್ತ ರೂ.6926.00ಲಕ್ಷಗಳಲ್ಲಿ ಅನುಷ್ಠಾನಗೊಳಿಸಲು ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆರವರು ಮೇಲೆ ಓದಲಾದ (3) ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

ಚಾಲ್ತಿ ಪಾರದರ್ಶಕ ನೀತಿಯನ್ವಯ ನಿಯಮಾನುಸಾರ ದಾವಣಗೆರೆ ಜಿಲ್ಲಾ ಪಂಚಾಯತ್ ಹಾಗೂ ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಮುಂದಿನ ಪ್ರಕ್ರಿಯೆಯನ್ನು ಅನುಸರಿಸಲು ಅನುವಾಗುವಂತೆ **ಜಲ ಜೀವನ ಮಿಷನ್ (JJM)** ಕಾರ್ಯಕ್ರಮದ ಅಡಿಯಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲು ನಿರ್ಧರಿಸಲಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಕುನೀ&ನೈಇ/78/ಗ್ರಾನೀಸ(4)2021, ಬೆಂಗಳೂರು, ದಿನಾಂಕ:06.03.2021.**/264

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ದಾವಣಗೆರೆ ಜಿಲ್ಲೆ, ಹೊನ್ನಾಳಿ ತಾಲ್ಲೂಕಿನ ಪಲವನಹಳ್ಳಿ ಹೊಸಕೊಪ್ಪ ಮತ್ತು ಇತರೆ 59 ಜನವಸತಿಗಳಿಗೆ ಶುದ್ಧ ಕುಡಿಯುವ ನೀರನ್ನು ಪೂರೈಕೆ ಮಾಡಲು DBOT ಆಧಾರದ ಮೇಲೆ ಬಹುಗ್ರಾಮ ಕುಡಿಯುವ ನೀರು ಯೋಜನೆಯನ್ನು ಜಲ ಜೀವನ್ ಮಿಷನ್ ಯೋಜನೆಯಡಿ ಸಂಯೋಜಿತಗೊಳಿಸಿದ NABARD-RIDF XXVIರಡಿ ಅನುಷ್ಠಾನಗೊಳಿಸಲು 5 ವರ್ಷಗಳ ಕಾರ್ಯಾಚರಣೆ ಮತ್ತು ನಿರ್ವಹಣೆ (O&M) ಬಾಬ್ತು ಸೇರಿದಂತೆ **ರೂ.6926.00ಲಕ್ಷ (ಆರು ಸಾವಿರದ ಒಂಬೈನೂರ ಇಪ್ಪತ್ತಾರು ಲಕ್ಷ ರೂಪಾಯಿಗಳು ಮಾತ್ರ)** ಗಳ ಅಂದಾಜು ಮೊತ್ತದಲ್ಲಿ ಕಾರ್ಯಗತಗೊಳಿಸುವ ಸಂಬಂಧ **ಜಲ ಜೀವನ್ ಮಿಷನ್ (JJM)** ಕಾರ್ಯಕ್ರಮದ ಅಡಿಯಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

**2. ಆಡಳಿತಾತ್ಮಕ ಅನುಮೋದನೆ ಮತ್ತು ಅನುದಾನ ವಿನಿಯೋಗವು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟಿರುತ್ತದೆ:**

a) ಅನುಮೋದಿತ ಕುಡಿಯುವ ನೀರಿನ ಯೋಜನೆಯ ವ್ಯಾಪ್ತಿಗೆ ಬರುವ ಗ್ರಾಮ / ಜನವಸತಿಗಳು ಮತ್ತ್ಯಾವುದೇ ಯೋಜನೆಗಳಡಿ ಸೇರ್ಪಡೆಯಾಗಿರಬಾರದು.

b) ಯೋಜನೆಯ **DBOT** ಟೆಂಡರ್‌ನ್ನು KTPP ಪಾರದರ್ಶಕ ನಿಯಮಗಳನ್ನು ಅನುಸರಿಸಿ ಅದರಂತೆ ಕ್ರಮವಹಿಸತಕ್ಕದ್ದು.

c) ಟೆಂಡರ್ ಅವಾರ್ಡ್ ಮಾಡುವ ಮೊದಲು ಅಗತ್ಯವಿರುವ ಅನುದಾನವನ್ನು ಲಭ್ಯತೆ ಮಾಡಿಕೊಂಡು ಕ್ರಿಯಾ ಯೋಜನೆಯಲ್ಲಿ ಅಳವಡಿಸಿದ ನಂತರ ನಿಯಮಾನುಸಾರ ಮುಂದಿನ ಕ್ರಮವಹಿಸುವುದು.

d) ಈ ಯೋಜನೆಯ ಅನುಷ್ಠಾನ ಮತ್ತು ಅನುದಾನ ವಿನಿಯೋಗದಲ್ಲಿ ಅನುಮೋದಿತ ಟೆಂಡರ್ ಮೊತ್ತ ಮೀರಿ ಹೆಚ್ಚಳವಾಗದಂತೆ ಅನುಷ್ಠಾನ ಅಧಿಕಾರಿಗಳು ನಿಗಾವಹಿಸಿ ಪ್ರಚಲಿತ ನಿಯಮಗಳನುಸಾರ ಅಗತ್ಯವಿರುವ ನಿಬಂಧನೆಗಳನ್ನು ಅಳವಡಿಸಿಕೊಂಡು ಸೂಕ್ತ ರೀತಿಯಲ್ಲಿ ಒಡಂಬಡಿಕೆ – ಕರಾರುಗಳನ್ನು ಮಾಡಿಕೊಳ್ಳತಕ್ಕದ್ದು.

e) ಯಶಸ್ವಿ ಗುತ್ತಿಗೆದಾರರು ಕಾಮಗಾರಿಯನ್ನು ಉತ್ತಮ ಗುಣಮಟ್ಟದಲ್ಲಿ ಪೂರ್ಣಗೊಳಿಸಿ ಕಾರ್ಯಗತಗೊಳಿಸಬೇಕು. ತದನಂತರ **5** ವರ್ಷಗಳ ಕಾಲ ಸದರಿ ಯೋಜನೆಯ ಸಂಪೂರ್ಣ ನಿರ್ವಹಣೆ ಹಾಗೂ ಕಾರ್ಯಾಚರಣೆ ಜವಾಬ್ದಾರಿಯನ್ನು (ವಿದ್ಯುತ್ ಶುಲ್ಕ ಹೊರತುಪಡಿಸಿ) ಸದರಿ ಸಂಸ್ಥೆ ನಿರ್ವಹಿಸತಕ್ಕದ್ದು.

f) ಯೋಜನಾ ವ್ಯಾಪ್ತಿಯ ಜನವಸತಿಗಳಿಗೆ 55 LPCD ನೀರನ್ನು ಒದಗಿಸುವುದು. ಯಾವುದೇ ಕಾರಣಕ್ಕೂ ಅನುಮೋದಿತ ಯೋಜನಾ ಅಂದಾಜು ವೆಚ್ಚದಲ್ಲಿ ಹೆಚ್ಚಳವಾದಲ್ಲಿ ಗುತ್ತಿಗೆದಾರರೇ ಅಂತಹ ಹೆಚ್ಚಳ ಭರಿಸತಕ್ಕದ್ದು.

g) ಗುತ್ತಿಗೆದಾರರು ಸಿದ್ಧಪಡಿಸುವ ಡಿ.ಪಿ.ಆರ್.ಗೆ **ಮುಖ್ಯ ಅಭಿಯಂತರರು, ಗ್ರಾ.ಕು.ನೀ&ನೈ.** ಇಲಾಖೆ ಇವರ ಅಧೀನದಲ್ಲಿರುವ **DBOT** ತಾಂತ್ರಿಕ ಸಮಿತಿಯು ತಾಂತ್ರಿಕ ಸಿಂಧುತ್ವವನ್ನು ಪರಿಶೀಲಿಸಿ ದೃಢೀಕರಿಸಬೇಕು. ಹೀಗೆ ದೃಢೀಕರಿಸುವಾಗ ವಾಸ್ತವಿಕವಾಗಿ ಅಗತ್ಯವಿರುವ ಪ್ರಮಾಣದ ಶುದ್ಧ ಕುಡಿಯುವ ನೀರಿನ ಪೂರೈಕೆ ವ್ಯವಸ್ಥೆಗೆ ಎಲ್ಲಾ ತಾಂತ್ರಿಕ ವಿನ್ಯಾಸಗಳು ಮತ್ತು ಕಾಮಗಾರಿಗಳು ಪೂರಕವಾಗಿರುವುದನ್ನು ದೃಢಪಡಿಸಿಕೊಳ್ಳಬೇಕು.

h) ಈ ಯೋಜನೆಯ ಕಾಮಗಾರಿಯನ್ನು 18 ತಿಂಗಳ ಕಾಲಮಿತಿಯೊಳಗೆ ಅನುಷ್ಠಾನಗೊಳಿಸತಕ್ಕದ್ದು. ಯಾವುದೇ ವಿಳಂಬಕ್ಕೆ ಅವಕಾಶವೀಯಕೂಡದು. ಯೋಜನೆಯ ಘಟಕದಲ್ಲಿನ ಸಾಮಗ್ರಿಗಳ ಬೆಲೆ ಹೆಚ್ಚಳಕ್ಕೆ ಅವಕಾಶವಿರುವುದಿಲ್ಲ. ಬಲ್ಕ್‌ವಾಟರ್ ಮೀಟರ್‌ಗಳನ್ನು ಎಲ್ಲಾ ಜನವಸತಿಗಳ OHT ಬಳಿ ಅಳವಡಿಸತಕ್ಕದ್ದು.

i) ಯೋಜನಾ ಅಂದಾಜು ಮೊತ್ತದ ಕನಿಷ್ಠ **10%**ನ್ನು ಯೋಜನೆ ಕಾರ್ಯಗತಗೊಳಿಸಿ ತೃಪ್ತಿಕರ **O&M** ವ್ಯವಸ್ಥೆ ನಿರೂಪಿಸುವ ಕಾರ್ಯಕ್ಷಮತೆ ಆಧರಿಸಿ ನಂತರ ಗುತ್ತಿಗೆದಾರರಿಗೆ ಪಾವತಿಸಬೇಕು.

j) ಈ ಯೋಜನೆಯ ಮುಖ್ಯ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿದ ನಂತರ, ಅವುಗಳ ಗುಣಮಟ್ಟ ಮತ್ತು ಕಾರ್ಯಕ್ಷಮತೆ ಮತ್ತು **PMC** ವರದಿ ಆಧರಿಸಿ ಅನುಮೋದಿತ **ToR** ಹಾಗೂ ಟೆಂಡರ್ ಕರಾರಿನಂತೆ ನಿಯಮಾನುಸಾರ ಬಿಲ್ ಪಾವತಿಸಲು ಅನುಷ್ಠಾನಾಧಿಕಾರಿಗಳು ಹಾಗೂ **ಮುಖ್ಯ ಅಭಿಯಂತರರು, ಗ್ರಾ.ಕು.ನೀ&ನೈ.** ಇಲಾಖೆರವರು ಕ್ರಮವಹಿಸಬೇಕು. ಕಾಮಗಾರಿಯ ಕಾಲಕಾಲಿಕ ಪ್ರಗತಿ ಮತ್ತು ಗುಣಮಟ್ಟ ಪರಿಶೀಲಿಸಿ **ಮುಖ್ಯ ಅಭಿಯಂತರರು, ಗ್ರಾ.ಕು.ನೀ&ನೈ.** ಇಲಾಖೆಗೆ ವರದಿ ಮಾಡತಕ್ಕದ್ದು.

k) ಈ ಯೋಜನೆಯ ವಿನ್ಯಾಸದ ಕಾರ್ಯಸಿಂಧುತ್ವ ಪರಿಶೀಲಿಸುವುದು, ಕಾಲಮಿತಿಯೊಳಗೆ ಯೋಜನೆ ಅನುಷ್ಠಾನಗೊಳಿಸುವುದು ಮತ್ತು ಯೋಜನೆಯ ಕಾಮಗಾರಿಗಳ ಗುಣಮಟ್ಟ ಪರಿವೀಕ್ಷಣೆ ಸಲುವಾಗಿ ಅಗತ್ಯವಿರುವ ಯೋಜನಾ ಉಸ್ತುವಾರಿ ಘಟಕವನ್ನು ಟೆಂಡರ್ ಮುಖೇನ ಗೊತ್ತುಪಡಿಸಿ, ಸರ್ಕಾರದ ಅನುಮೋದನೆ ಪಡೆಯಲು **ಮುಖ್ಯ ಅಭಿಯಂತರರು, ಗ್ರಾ.ಕು.ನೀ&ನೈ.** ಇಲಾಖೆಗೆ ಇವರು ಜರೂರಾಗಿ ಕ್ರಮವಹಿಸತಕ್ಕದ್ದು.

l) ಮೇಲ್ಕಂಡ ಅನುಮೋದಿತ ಮೊತ್ತ **DBOT** ತಾಂತ್ರಿಕ ಸಮಿತಿ ದೃಢೀಕರಿಸುವ ಯೋಜನೆಯ ಮುಖ್ಯ ಕಾಮಗಾರಿಗಳ ವಾಸ್ತವಿಕ ಅಂದಾಜು ಮೊತ್ತದ ನಿಬಂಧನೆಗೊಳಪಟ್ಟಿರುತ್ತದೆ. ಅಂತೆಯೇ, ಅನುಮೋದಿತ ಸಂಸ್ಥೆಯೊಡನೆ **MoU**/ಕರಾರು ಪತ್ರ ಮಾಡಿಕೊಳ್ಳುವ ಮೊದಲು ಗರಿಷ್ಠ ಮಿತವ್ಯಯ ಅಳವಡಿಸಿ, ಸರ್ಕಾರದ ಅನುಮತಿ ಪಡೆದು ಯೋಜನೆಯ ಅನುಷ್ಠಾನ ಕುರಿತು **ಮುಖ್ಯ ಅಭಿಯಂತರರು, ಗ್ರಾ.ಕು.ನೀ&ನೈ.** ಇಲಾಖೆ ಮುಂದಿನ ಕ್ರಮವಹಿಸತಕ್ಕದ್ದು.

3. ಈ ಆದೇಶವನ್ನು **ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 463 ವೆಚ್ಚ-6/2020 ದಿನಾಂಕ:25.01.2021** ಮತ್ತು **ಜಲಸಂಪನ್ಮೂಲ ಇಲಾಖೆಯ ಟಿಪ್ಪಣಿ ಸಂ:ಜಸಂಇ 146 ಎಂಎಂಬಿ 2020, ದಿನಾಂಕ:08.02.2021**ರ ಸಹಮತಿಗಳ ಅನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

6/3/2021

ಉಪ ಕಾರ್ಯದರ್ಶಿ (ಆಡಳಿತ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ –AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–I – G&SSA- AUDIT) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು– II – E&RSA-) ಕರ್ನಾಟಕ, ಬೆಂಗಳೂರು.
4. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ದಾವಣಗೆರೆ.**
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ, ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾ.ಅ.ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
8. ಆಯುಕ್ತರು, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು.
9. ಮುಖ್ಯ ಅಭಿಯಂತರರು, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
10. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
11. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, **ದಾವಣಗೆರೆ.**
12. ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&.ನೈ. ವೃತ್ತ ಕಛೇರಿ, **ಬೆಂಗಳೂರು.**
13. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ.ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
14. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾ.ಅ.ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
15. ಮುಖ್ಯ ಲೆಕ್ಕಾಧಿಕಾರಿ, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು.
16. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.&.ನೈ. ವಿಭಾಗ, **ದಾವಣಗೆರೆ.**
17. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ.ಮತ್ತು ಪಂ.ರಾಜ್ ಇಲಾಖೆ, (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು) ಬೆಂಗಳೂರು.
18. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ) ಬೆಂಗಳೂರು.
19. ಗ್ರಾಅಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು) ಬೆಂಗಳೂರು.
20. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.